## <u>ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಕೊಡಗು ಜಿಲ್ಲೆ, ಮಡಿಕೇರಿ ಇವರ ನಡವಳಿ</u>

ವಿಷಯ: ಜಿಲ್ಲೆಯಲ್ಲಿ ಕೊರೋನಾ ವೈರಸ್ ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: 1. ಈ ಕಚೇರಿ ನಡವಳಿ ಸಮ ಸಂಖ್ಯೆ ದಿನಾಂಕ 20.03.2020

2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ 30-06-2020

----------

ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ಕೊರೋನಾ ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಈಗಾಗಲೇ ಜಾರಿಗೊಳಿಸಲಾಗಿದ್ದು, ಹೆಚ್ಚಿನ ರೀತಿಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯತೆ ಇರುತ್ತದೆ. ಮುಂದುವರೆದು, ಸುರಕ್ಷತೆಯ ದೃಷ್ಠಿಯಿಂದ ಹೊರ ರಾಜ್ಯ ಮತ್ತು ವಿದೇಶದಿಂದ ಆಗಮಿಸುವ ಪ್ರವಾಸಿಗರಿಗೆ ಜಿಲ್ಲೆಯ ಎಲ್ಲಾ ಹೋಟೆಲ್, ಹೋಂ ಸ್ಟೇ, ರೆಸಾರ್ಟ್, ಲಾಡ್ಜ್, ವಸತಿ ಗೃಹ ಇತ್ಯಾದಿಗಳಲ್ಲಿ ವಸತಿ ಸೌಕರ್ಯ ನೀಡದಂತೆ ಈಗಾಗಲೇ ನಿರ್ದೇಶನ ನೀಡಲಾಗಿರುತ್ತದೆ

ಕೊಡಗು ಜಿಲ್ಲೆಗೆ ಹೊರ ಜಿಲ್ಲೆಗಳಿಂದ ಪ್ರವಾಸಿಗರು ಆಗಮಿಸಿ ಸುರಕ್ಷತಾ ಕ್ರಮಗಳ ಬಗ್ಗೆ ಮುತುವರ್ಜಿ / ಕಾಳಜಿವಹಿಸದಿರುವ ಬಗ್ಗೆ ಜಿಲ್ಲೆಯ ಜನತೆ ಆತಂಕಗೊಂಡು ಜಿಲ್ಲಾಡಳಿತದ ಗಮನಕ್ಕೆ ತಂದಿರುತ್ತಾರೆ.

ಉಲ್ಲೇಖ(2)ರ ಸರ್ಕಾರದ ಆದೇಶದ ಅನ್‌ಲಾಕ್ 2 ಮಾರ್ಗಸೂಚಿಯ ಕ್ರಮ ಸಂಖ್ಯೆ 7ರಲ್ಲಿ "*BBMP/District based on their asseement of the situation, may prohibit certain activities outside the Containment Zones, or impose such restrictions as deemed necessary.*" ಎಂದು ತಿಳಿಸಿರುವುದಾಗಿದೆ.

ಆದ್ದರಿಂದ ಮೇಲಿನ ಅಂಶಗಳ ಹಿನ್ನಲೆಯಲ್ಲಿ ಸಾರ್ವಜನಿಕ ಹಿತಾಸಕ್ತಿಯಿಂದ ಈ ಕೆಳಕಂಡಂತೆ ಆದೇಶ.

## <u>ಆದೇಶ ಸಂಖ್ಯೆ: ಎಂ.ಎ.ಜಿ./194/2019-20, ದಿನಾಂಕ 07.07.2020.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳಂತೆ **<u>ಅನೀಸ್ ಕಣ್ಮಣಿ ಜಾಯ್, ಭಾ.ಆ.ಸೇ., ಕೊಡಗು ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ</u>** ಆದ ನಾನು ಸಾರ್ವಜನಿಕ ಹಿತಾಸಕ್ತಿಯಿಂದ **<u>ಸಿಆರ್‌ಪಿಸಿ ಕಾಯ್ದೆ 1973ರ ಸೆಕ್ಷನ್ 144(3)ರಡಿ ಹಾಗೂ ಡಿಸಾಸ್ಟರ್ ಮ್ಯಾನೇಜ್‌ಮೆಂಟ್ ಆಕ್ಟ್-2005ರ ಕಲಂ 34(c)ರಡಿಯಲ್ಲಿ ಮತ್ತು ಉಲ್ಲೇಖ(2)ರ ಆದೇಶದಂತೆ ಪ್ರದತ್ತವಾದ ಅಧಿಕಾರ</u>** ಚಲಾಯಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ಆದೇಶ ಹೊರಡಿಸಿರುತ್ತೇನೆ.

1. ಇಂದಿನಿಂದ ಮುಂದಿನ ಆದೇಶದವರೆಗೆ ಕೊಡಗು ಜಿಲ್ಲೆಗೆ ಹೊರ ಜಿಲ್ಲೆ, ಹೊರ ರಾಜ್ಯ ಮತ್ತು ವಿದೇಶಗಳಿಂದ ಆಗಮಿಸುವ ಪ್ರವಾಸಿಗರಿಗೆ ಜಿಲ್ಲೆಯ ಎಲ್ಲಾ ಹೋಟೆಲ್, ಹೋಂ ಸ್ಟೇ, ರೆಸಾರ್ಟ್, ಲಾಡ್ಜ್, ವಸತಿ ಗೃಹ ಇತ್ಯಾದಿಗಳಲ್ಲಿ ವಸತಿ ಸೌಕರ್ಯ ನೀಡತಕ್ಕದ್ದಲ್ಲ. ಅಲ್ಲದೆ, ಇನ್ನು ಮುಂದೆ ಜಿಲ್ಲೆಯ ಹೊರಭಾಗದ ಪ್ರವಾಸಿಗರ ಆನ್‌ಲೈನ್ / ಆಫ್‌ಲೈನ್ ಮುಂತಾದ ಯಾವುದೇ ರೂಪದ ಬುಕ್ಕಿಂಗ್ ಸ್ವೀಕರಿಸತಕ್ಕದ್ದಲ್ಲ.

Scanned with CamScanner

2. ಹಾಲಿ ಆಗಮಿಸಿ ವಸತಿ ಸೌಕರ್ಯ ಹೊಂದಿರುವ ಪ್ರವಾಸಿಗರನ್ನು ಬಲವಂತವಾಗಿ ಕಳುಹಿಸದೆ, ಅವರು ಈಗಾಗಲೇ ವಾಸ್ತವ್ಯಕ್ಕೆ ಕಾಯ್ದಿರಿಸಿದ ಅವಧಿ ಪೂರ್ಣಗೊಳ್ಳುವವರೆಗೆ ಕಾಯುವುದು.

3. ಪ್ರವಾಸಿ ಉದ್ದೇಶಕ್ಕೆ ಈಗಾಗಲೇ ಮುಂಗಡ ಬುಕ್ಕಿಂಗ್ ಮಾಡಿ ಆಗಮಿಸಿರದಿದ್ದಲ್ಲಿ, ಅವರು ಆಗಮಿಸುವ ಮುಂಚಿತವಾಗಿ ಅವರಿಗೆ ಸೂಕ್ತ ಮಾಹಿತಿ ನೀಡಿ ಬುಕ್ಕಿಂಗ್ ರದ್ದುಪಡಿಸುವುದು.

4. ತುರ್ತು / ವೈದ್ಯಕೀಯ / ಅನಿವಾರ್ಯ ಪರಿಸ್ಥಿತಿಯಲ್ಲಿ ಆಗಮಿಸುವವರಿಗೆ ನಿರ್ಬಂಧ ಇರುವುದಿಲ್ಲ. ಆದರೆ ಈ ರೀತಿಯಾಗಿ ಆಗಮಿಸಿದಲ್ಲಿ, ಅವರು ಆಗಮಿಸಿದ ಕಾರಣದ ಪೂರ್ಣ ವಿವರಗಳನ್ನು ಮತ್ತು ಅವರ ವಿವರಗಳನ್ನು ಪಡೆದು ವಸತಿ ಸೌಕರ್ಯ ನೀಡುವುದು ಮತ್ತು ಈ ಮಾಹಿತಿಯನ್ನು ಸ್ಥಳೀಯ ಕಾರ್ಯವ್ಯಾಪ್ತಿಯ ಆರಕ್ಷಕ ಠಾಣೆ / ನಗರ ಸ್ಥಳೀಯ ಸಂಸ್ಥೆ/ ಗ್ರಾಮ ಪಂಚಾಯತ್‌ಗೆ ಆ ಕೂಡಲೇ ನೀಡುವುದು.

ಮೇಲ್ಕಂಡ ಆದೇಶದ ಉಲ್ಲಂಘನೆಯು ಭಾರತೀಯ ದಂಡ ಸಂಹಿತೆ 1860ರ ಕಲಂ 188 ರೀತ್ಯಾ ದಂಡನೀಯವಾಗಿದ್ದು, ಕಡ್ಡಾಯವಾಗಿ ಪಾಲಿಸಲು ತಿಳಿಸಲಾಗಿದೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಮಾನ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಸತ್ರ ನ್ಯಾಯಾಲಯ, ಮಡಿಕೇರಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಆರಕ್ಷಕ ಅಧೀಕ್ಷಕರು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರಿಗೆ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
4. ಉಪ ವಿಭಾಗಾಧಿಕಾರಿ, ಮಡಿಕೇರಿ ಉಪ ವಿಭಾಗ, ಮಡಿಕೇರಿ ಇವರಿಗೆ.
5. ಜಿಲ್ಲೆಯ ಮೂರೂ ತಾಲ್ಲೂಕು ತಹಶೀಲ್ದಾರರಿಗೆ ಸೂಕ್ತ ಕ್ರಮಕ್ಕಾಗಿ.
6. ಜಿಲ್ಲೆಯ ಮೂರೂ ತಾಲ್ಲೂಕು ಆರಕ್ಷಕ ಉಪ ಅಧೀಕ್ಷಕರಿಗೆ ಸೂಕ್ತ ಕ್ರಮಕ್ಕಾಗಿ.
7. ಜಿಲ್ಲೆಯ ಮೂರೂ ತಾಲ್ಲೂಕು ಪಂಚಾಯ್ತಿ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
8. ಪೌರಾಯುಕ್ತರು, ನಗರ ಸಭೆ, ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ.
9. ಜಿಲ್ಲೆಯ ಮೂರೂ ತಾಲ್ಲೂಕು ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
10. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಡಿಕೇರಿ ಇವರಿಗೆ ಕಳುಹಿಸುತ್ತಾ, ಆದೇಶವನ್ನು ಸರ್ಕಾರಿ ಸುದ್ದಿ ರೂಪದಲ್ಲಿ ಎಲ್ಲಾ ಮಾಧ್ಯಮದ ಮೂಲಕ ಬಿತ್ತರಿಸಲು ಸೂಕ್ತ ಕ್ರಮಕ್ಕಾಗಿ.
11. ಸಂಬಂಧಪಟ್ಟ ಎಲ್ಲಾ ತಾಲ್ಲೂಕು, ಹೋಬಳಿ ಮತ್ತು ಗ್ರಾಮ ಮಟ್ಟದ ಅಧಿಕಾರಿಗಳಿಗೆ ಸಂಬಂಧಪಟ್ಟ ಜಿಲ್ಲಾಮಟ್ಟದ ಅಧಿಕಾರಿಗಳ ಮೂಲಕ ಸೂಕ್ತ ಕ್ರಮಕ್ಕಾಗಿ.
12. ಸಂಬಂಧಪಟ್ಟ ಎಲ್ಲಾ ಇಲಾಖಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
13. ಸಂಬಂಧಪಟ್ಟ ಎಲ್ಲಾ ಸಂಘ ಸಂಸ್ಥೆ / ಅಸೋಸಿಯೇಷನ್‌ಗಳ ಅಧ್ಯಕ್ಷರು, ಪದಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

Scanned with CamScanner